ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1434
ಮಾನ್ಯ ಸದಸ್ಯರ ಹೆಸರು	ಶ್ರೀ ಬಿ.ಎಂ.ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	17.03.2021
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಹಿಂದಿನ ಸರ್ಕಾರ ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಹಿಂದುಳಿದವರ ಕುರಿತು ಸಮೀಕ್ಷೆ ಮಾಡಲಾಗಿದ್ದು, ಈ ವರದಿಯನ್ನು ಸದನದ ಮುಂದೆ ಮಂಡಿಸುವಂತೆ ಈಗಾಗಲೇ ಸದನದಲ್ಲಿ ಒತ್ತಾಯಿಸಿದ್ದು, ಈ ವರದಿಯನ್ನು ಮಂಡಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು)	ಶ್ರೀ ಹೆಚ್. ಕಾಂತರಾಜ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದ ಎಲ್ಲ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು 2015ರಲ್ಲಿ ಕೈಗೊಳ್ಳಲಾಗಿದ್ದು, ಸಮೀಕ್ಷೆಯ ವರದಿಯನ್ನು ಸಿದ್ಧಪಡಿಸಿರುತ್ತದೆ. ಶ್ರೀ ಹೆಚ್ ಕಾಂತರಾಜ ರವರ ನೇತೃತ್ವದ ಆಯೋಗದ ಪದಾವಧಿಯು ದಿನಾಂಕ:21.09.2019ರಂದು ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಸರ್ಕಾರಕ್ಕೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸಲ್ಲಿಸಲಾಗಿರುವುದಿಲ್ಲ. ಪ್ರಸ್ತುತ, ಶ್ರೀ ಕೆ. ಜಯಪ್ರಕಾಶ ಹೆಗ್ಡೆ ಇವರ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ದಿನಾಂಕ:23.11.2020 ರಂದು ಸರ್ಕಾರದಿಂದ ನೇಮಕ ಗೊಂಡಿರುತ್ತದೆ. ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮವಹಿಸಲಾಗುವುದು.
ಆ)	ಈ ಸಮೀಕ್ಷೆ ಗೌಪ್ಯವಾಗಿಡಲು ಕಾರಣವೇನು; ಜನರ ನಿರೀಕ್ಷೆಯಂತೆ ಯಾವಾಗ ಇದನ್ನು ಸರ್ಕಾರ ಬಹಿರಂಗಪಡಿಸುತ್ತದೆ; ಈ ಸಮೀಕ್ಷೆಯನ್ನು ನಡೆಸಲು	ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸರ್ಕಾರಕ್ಕೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸಲ್ಲಿಸಿದ ನಂತರ ಪರಿಶೀಲಿಸಲಾಗುವುದು.

...2.

	ಸರ್ಕಾರಕ್ಕೆ ತಗುಲಿರುವ ಒಟ್ಟು ವೆಚ್ಚವೆಷ್ಟು?	ಸಮೀಕ್ಷೆಗಾಗಿ ಇಲ್ಲಿಯವರೆಗೆ ರೂ.162.67 ಕೋಟಿಗಳನ್ನು ವೆಚ್ಚ ಮಾಡಲಾಗಿರುತ್ತದೆ.

ಸಂಖ್ಯೆ:ಹಿಂವಕ 80 ಬಿಸಿಎ 2021

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು